**All India Radio: Bangalore**
**National Bulletin In Kannada**
**13.05.2026  19.35 p.m.**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

ಮುಖ್ಯಾಂಶಗಳು

೧. ಹದಿನಾಲ್ಕು ಮುಂಗಾರು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಹೆಚ್ಚಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ

೨. ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ: ಸಿಬಿಐ ನಿಂದ ಐವರು ಆರೋಪಿಗಳ ಬಂಧನ

೩. ಚೀನಾ ಅಧ್ಯಕ್ಷರೊಂದಿಗೆ ಉನ್ನತ ಮಟ್ಟದ ಶೃಂಗಸಭೆಗಾಗಿ ಬೀಜಿಂಗ್ ತಲುಪಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

೪. ನವದೆಹಲಿಯಲ್ಲಿ ನಾಳೆಯಿಂದ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆ

೫. ಐಪಿಎಲ್ ಟಿ-೨೦ ಕ್ರಿಕೆಟ್: ಇಂದಿನ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು-ಕೊಲ್ಕತ್ತಾ ನೈಟ್‌ರೈಡರ್ಸ್ ಮುಖಾಮುಖಿ

---

೨೦೨೬-೨೭ರ ಮಾರುಕಟ್ಟೆ ಋತುವಿನಲ್ಲಿ ೧೪ ಮುಂಗಾರು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆಯನ್ನು ಹೆಚ್ಚಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.

ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಬೆಳೆಗಾರರಿಗೆ ತಮ್ಮ ಉತ್ಪನ್ನಗಳಿಗೆ ಲಾಭದಾಯಕ ಬೆಳೆಗಳನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಮುಂಗಾರು ಬೆಳೆಗಳ ಕನಿಷ್ಠ ಬೆಂಬಲ ಬೆಲೆಯನ್ನು ಹೆಚ್ಚಿಸಿದೆ. ಮುಂಗಾರು ಋತುವಿನಲ್ಲಿ ರೈತರಿಗೆ ಅಂದಾಜು ಪಾವತಿ ೨ ಲಕ್ಷ ೬೭ ಸಾವಿರ ಕೋಟಿ ರೂಪಾಯಿಗಳಾಗಿರುತ್ತದೆ ಎಂದು ತಿಳಿಸಿದರು.

ಈ ಋತುವಿನಲ್ಲಿ ಅಂದಾಜು ೮೨೪ ಲಕ್ಷ ಮೆಟ್ರಿಕ್ ಟನ್ ಬೆಳೆಗಳನ್ನು ಖರೀದಿಸಲಾಗುವುದು. ಸೂರ್ಯಕಾಂತಿ ಬೀಜಕ್ಕೆ ಪ್ರತಿ ಕ್ವಿಂಟಾಲ್‌ಗೆ ೬೨೨ ರೂಪಾಯಿಗಳ ಕನಿಷ್ಠ ಬೆಂಬಲ ಬೆಲೆ ಹೆಚ್ಚಳವನ್ನು ಶಿಫಾರಸ್ಸು ಮಾಡಲಾಗಿದೆ. ಇದೇ ರೀತಿ ಹತ್ತಿಗೆ ಕ್ವಿಂಟಾಲ್‌ಗೆ ೫೫೭ ರೂಪಾಯಿ ಹಾಗೂ ಎಳ್ಳು ಕ್ವಿಂಟಾಲ್‌ಗೆ ೫೦೦ ರೂಪಾಯಿಗಳ ಹೆಚ್ಚಳವನ್ನು ಶಿಫಾರಸ್ಸು ಮಾಡಿದೆ ಎಂದು ಅವರು ಮಾಹಿತಿ ನೀಡಿದರು.

’ಎ’ ದರ್ಜೆಯ ಭತ್ತಕ್ಕೆ ಕ್ವಿಂಟಾಲ್‌ಗೆ ೨ ಸಾವಿರದ ೪೭೧ ರೂಪಾಯಿ, ಹೈಬ್ರಿಡ್ ಜೋಳ ಕ್ವಿಂಟಾಲ್‌ಗೆ ೪ ಸಾವಿರದ ೨೩ ರೂಪಾಯಿ, ಸಜ್ಜೆ ಕ್ವಿಂಟಾಲ್‌ಗೆ ೨ ಸಾವಿರದ ೯೦೦ ರೂಪಾಯಿ ಮತ್ತು ತೊಗರಿ ಬೇಳೆ ಕ್ವಿಂಟಾಲ್‌ಗೆ ೮ ಸಾವಿರದ ೪೫೦ ರೂಪಾಯಿ ಕನಿಷ್ಠ ಬೆಂಬಲ ಬೆಲೆ ಇರಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

---

ತಮಿಳುನಾಡು ವಿಧಾನಸಭೆಯಲ್ಲಿ ಇಂದು ನಡೆದ ವಿಶ್ವಾಸಮತ ಪರೀಕ್ಷೆಯಲ್ಲಿ ಮುಖ್ಯಮಂತ್ರಿ ಸಿ.ಜೋಸೆಫ್ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ-ಟಿವಿಕೆ ಸರ್ಕಾರ ಜಯ ಸಾಧಿಸಿದೆ.

ಸದನದಲ್ಲಿ ವಿಶ್ವಾಸಮತಯಾಚನೆ ವೇಳೆ, ಒಟ್ಟು ೧೪೪ ಶಾಸಕರು, ಸರ್ಕಾರದ ಪರವಾಗಿ ಮತ ಚಲಾಯಿಸುವ ಮೂಲಕ ಬಹುಮತ ಸಾಬೀತುಪಡಿಸಿದರು. ವಿಶ್ವಾಸಮತ ನಿರ್ಣಯದ ವಿರುದ್ಧ ೨೨ ಶಾಸಕರು

ಮತ ಚಲಾಯಿಸಿದ್ದಾರೆ. ಐವರು ಶಾಸಕರು ಮತದಾನದಿಂದ ದೂರ ಉಳಿದರು. ಪ್ರಮುಖ ಪ್ರತಿಪಕ್ಷವಾದ ಡಿಎಂಕೆ ವಿಶ್ವಾಸಮತ ಪ್ರಕ್ರಿಯೆ ವೇಳೆ, ಸಭಾತ್ಯಾಗ ಮಾಡಿತು.

ಪ್ರತಿಪಕ್ಷಗಳ ಗೈರುಹಾಜರಿ ನಡುವೆ ನಡೆದ ಮತದಾನದಲ್ಲಿ ಟಿವಿಕೆ ಸರ್ಕಾರ ಬಹುಮತ ಪಡೆಯುವಲ್ಲಿ ಯಶಸ್ವಿಯಾಯಿತು.

---

ಎನ್‌ಡಿಎ ಮೈತ್ರಿಕೂಟದ ಆಲ್ ಇಂಡಿಯಾ ಎನ್‌ಆರ್ ಕಾಂಗ್ರೆಸ್ ಪಕ್ಷದ ಮುಖಂಡ ಎನ್.ರಂಗಸಾಮಿ ದಾಖಲೆಯ ಐದನೇ ಬಾರಿಗೆ ಪುದುಚೆರಿ ಮುಖ್ಯಮಂತ್ರಿಯಾಗಿ ಇಂದು ಪ್ರಮಾಣವಚನ ಸ್ವೀಕರಿಸಿದರು.

ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ಲೆಫ್ಟಿನೆಂಟ್ ಗವರ್ನರ್ ಕೆ.ಕೈಲಾಶನಾಥನ್ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು.

---

ನೀಟ್-ಯುಜಿ ೨೦೨೬ ಪರೀಕ್ಷೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳು ಮತ್ತು ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರೀಯ ತನಿಖಾ ದಳ-ಸಿಬಿಐ ಇಂದು ದೇಶದಾದ್ಯಂತ ವ್ಯಾಪಕ ಶೋಧ ನಡೆಸಿ, ಐವರು ಆರೋಪಿಗಳನ್ನು ಬಂಧಿಸಿದೆ.

ತನಿಖಾ ಸಂಸ್ಥೆಯು ರಾಜಸ್ಥಾನದ ಜೈಪುರದಿಂದ ಮೂವರು, ಹರಿಯಾಣದ ಗುರುಗ್ರಾಮದಿಂದ ಒಬ್ಬರು ಮತ್ತು ಮಹಾರಾಷ್ಟ್ರದ ನಾಸಿಕ್‌ನಿಂದ ಒಬ್ಬ ಆರೋಪಿಯನ್ನು ಬಂಧಿಸಿದೆ.

ಇದೇ ವೇಳೆ ದೇಶದ ವಿವಿಧ ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿರುವ ಸಿಬಿಐ ಅಧಿಕಾರಿಗಳು, ಪರೀಕ್ಷಾ ಅಕ್ರಮಕ್ಕೆ ಸಂಬಂಧಿಸಿದ ಮಹತ್ವದ ದಾಖಲೆಗಳು ಮತ್ತು ಎಲೆಕ್ಟ್ರಾನಿಕ್ ಪುರಾವೆಗಳನ್ನು ವಶಪಡಿಸಿಕೊಂಡಿದ್ದಾರೆ. ಪರೀಕ್ಷಾ ಪಾರದರ್ಶಕತೆಯನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಈ ಜಾಲದ ಹಿಂದಿರುವ ಇತರ ವ್ಯಕ್ತಿಗಳ ಪತ್ತೆಗಾಗಿ ತನಿಖೆ ತೀವ್ರಗೊಂಡಿದೆ.

---

ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗೆ ಉನ್ನತ ಮಟ್ಟದ ಶೃಂಗಸಭೆಗಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇಂದು ಬೀಜಿಂಗ್ ತಲುಪಿದ್ದಾರೆ.

ನಾಳೆಯಿಂದ ಪ್ರಾರಂಭವಾಗುವ ಎರಡು ದಿನಗಳ ಸಭೆಯಲ್ಲಿ, ಉಭಯ ನಾಯಕರು ಇರಾನ್‌ಗೆ ಸಂಬಂಧಿಸಿದ ಯುದ್ಧ, ತೈವಾನ್‌ಗೆ ಅಮೆರಿಕದ ಶಸ್ತ್ರಾಸ್ತ್ರ ಮಾರಾಟ, ವ್ಯಾಪಾರ ಮತ್ತು ಕೃತಕ ಬುದ್ಧಿಮತ್ತೆ ಹಾಗೂ ವಿಶ್ವದ ಎರಡು ದೊಡ್ಡ ಆರ್ಥಿಕತೆಗಳ ನಡುವೆ ಬೆಳೆಯುತ್ತಿರುವ ಆರ್ಥಿಕ ಮತ್ತು ತಾಂತ್ರಿಕ ಪೈಪೋಟಿಯ ನಡುವೆ ಸುಂಕ ಸೇರಿದಂತೆ ಹಲವಾರು ನಿರ್ಣಾಯಕ ವಿಷಯಗಳ ಕುರಿತು ಚರ್ಚಿಸುವ ನಿರೀಕ್ಷೆಯಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಎನ್ವಿಡಿಯಾ ಸಿಇಒ ಜೆನ್ಸನ್ ಹುವಾಂಗ್, ಆಪಲ್ ಸಿಇಒ ಟಿಮ್ ಕುಕ್, ಟೆಸ್ಲಾ ಮತ್ತು ಸ್ಪೇಸ್ ಎಕ್ಸ್ ಮುಖ್ಯಸ್ಥ ಎಲಾನ್ ಮಸ್ಕ್ ಮತ್ತು ಬ್ಲ್ಯಾಕ್‌ರಾಕ್ ಸಿಇಒ ಲ್ಯಾರಿ ಫಿಂಕ್ ಸೇರಿದಂತೆ ಮೆಟಾ, ವೀಸಾ, ಜೆ.ಪಿ. ಮೋರ್ಗಾನ್ ಮತ್ತು ಬೋಯಿಂಗ್ ಕಂಪನಿಗಳ ಹಿರಿಯ ಪ್ರತಿನಿಧಿಗಳು ನಿಯೋಗದ ಭಾಗವಾಗಿದ್ದಾರೆ.

೨೦೧೭ ರ ನಂತರ ಚೀನಾಗೆ ಟ್ರಂಪ್ ಅವರ ಮೊದಲ ಅಧಿಕೃತ ಭೇಟಿ ಇದಾಗಿದೆ. ಅಲ್ಲದೇ ಎರಡನೇ ಅವಧಿಗೆ ಅಮೆರಿಕ ಅಧ್ಯಕ್ಷರಾದ ನಂತರ ಚೀನಾಗೆ ಅವರ ಮೊದಲ ಭೇಟಿ ಇದಾಗಿದೆ.

---

ಇಂಡೋನೇಷಿಯಾದ ವಿದೇಶಾಂಗ ಸಚಿವ ಸುಗಿಯೊನೊ ಅವರು ಇಂದು ಬೆಳಗ್ಗೆ ದೆಹಲಿಯ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದರು.

ನಾಳೆಯಿಂದ ಪ್ರಾರಂಭವಾಗುವ ಎರಡು ದಿನಗಳ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯಲ್ಲಿ ಪಾಲ್ಗೊಳ್ಳಲು ಅವರು ಭಾರತಕ್ಕೆ ಭೇಟಿ ನೀಡಿದ್ದಾರೆ.

ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯ ಅಧ್ಯಕ್ಷತೆಯನ್ನು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ವಹಿಸಲಿದ್ದು, ಬ್ರಿಕ್ಸ್ ವಿದೇಶಾಂಗ ಸಚಿವರು, ಸದಸ್ಯ ಹಾಗೂ ಪಾಲುದಾರ ರಾಷ್ಟ್ರಗಳ ನಿಯೋಗದ ಮುಖ್ಯಸ್ಥರು ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಬ್ರಿಕ್ಸ್ ವಿದೇಶಾಂಗ ಸಚಿವರು, ಪ್ರಧಾನಿ ನರೇಂದ್ರ ಮೋದಿ ಅವರನ್ನೂ ಸಹ ಭೇಟಿ ಮಾಡಲಿದ್ದಾರೆ.

ಸಭೆಯಲ್ಲಿ ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರು, ಪರಸ್ಪರ ಆಸಕ್ತಿಯ ಜಾಗತಿಕ ಮತ್ತು ಪ್ರಾದೇಶಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ.

---

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಇಂದು ಚಿಲಿ ವಿದೇಶಾಂಗ ಸಚಿವ ಫ್ರಾನ್ಸಿಸ್ಕೋ ಪೆರೆಜ್ ಮೆಕೆನ್ನಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಮಾರುಕಟ್ಟೆಗಳನ್ನು ವೈವಿಧ್ಯಮಯಗೊಳಿಸಲು, ಆದ್ಯತೆಯ ಸರಕುಗಳ ರಫ್ತು ಉತ್ತೇಜಿಸಲು ಹಾಗೂ ಸೇವಾ ಆರ್ಥಿಕತೆಯನ್ನು ಸುಗಮಗೊಳಿಸಲು, ದ್ವಿಪಕ್ಷೀಯ ಸಹಕಾರ ಬಲಪಡಿಸುವ ಸಂಬಂಧ ಚರ್ಚೆ ನಡೆದಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ.

ನಾಳೆಯಿಂದ ಪ್ರಾರಂಭವಾಗುವ ಎರಡು ದಿನಗಳ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯಲ್ಲಿ ಪಾಲ್ಗೊಳ್ಳಲು, ಚಿಲಿ ವಿದೇಶಾಂಗ ಸಚಿವರು ಭಾರತಕ್ಕೆ ಭೇಟಿ ನೀಡಿದ್ದಾರೆ.

---

ಪ್ರಧಾನಿ ನರೇಂದ್ರ ಮೋದಿ ಇದೇ ಶುಕ್ರವಾರದಿಂದ ಆರು ದಿನಗಳ ಕಾಲ ಯುನೈಟೆಡ್ ಅರಬ್ ಎಮಿರೇಟ್ಸ್-ಯುಎಇ, ನೆದರ್ಲ್ಯಾಂಡ್ಸ್, ಸ್ವೀಡನ್, ನಾರ್ವೆ ಮತ್ತು ಇಟಲಿಗೆ ಭೇಟಿ ನೀಡಲಿದ್ದಾರೆ.

ಈ ಕುರಿತು ನವದೆಹಲಿಯಲ್ಲಿಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ಸಿ.ಬಿ.ಜಾರ್ಜ್, ತಮ್ಮ ಐದು ರಾಷ್ಟ್ರಗಳ ಭೇಟಿಯ ಮೊದಲ ಹಂತದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಶುಕ್ರವಾರ ಯುಎಇ ತಲುಪಲಿದ್ದಾರೆ. ಅಲ್ಲಿ ಅವರು ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರನ್ನು ಭೇಟಿ ಮಾಡಲಿದ್ದಾರೆ ಎಂದು ಮಾಹಿತಿ ನೀಡಿದರು.

ಉಭಯ ನಾಯಕರು ದ್ವಿಪಕ್ಷೀಯ ಸಹಕಾರದ ಬಗ್ಗೆ, ವಿಶೇಷವಾಗಿ ಇಂಧನ ಸಹಕಾರದ ಬಗ್ಗೆ ಹಾಗೂ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ ಎಂದು ಅವರು ತಿಳಿಸಿದರು.

---

ಅಸ್ಸಾಂ ಸರ್ಕಾರ ಈ ತಿಂಗಳ ೨೬ ರಂದು ರಾಜ್ಯ ವಿಧಾನಸಭೆಯಲ್ಲಿ ಏಕರೂಪ ನಾಗರಿಕ ಸಂಹಿತೆ-ಯುಸಿಸಿ ಮಸೂದೆಯನ್ನು ಮಂಡಿಸಲಿದೆ.

ನೂತನ ಸರ್ಕಾರದ ಮೊದಲ ಸಂಪುಟ ಸಭೆಯ ಅಧ್ಯಕ್ಷತೆ ವಹಿಸಿದ ನಂತರ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ, ಈ ಘೋಷಣೆ ಮಾಡಿದರು.

ಮೇ ೨೧ ರಿಂದ ೨೬ ರವರೆಗೆ ಅಸ್ಸಾಂ ವಿಧಾನಸಭೆಯ ವಿಶೇಷ ಅಧಿವೇಶನ ನಡೆಯಲಿದ್ದು, ಈ ಸಂದರ್ಭದಲ್ಲಿ ಹೊಸದಾಗಿ ಆಯ್ಕೆಯಾದ ಶಾಸಕರು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಅಧಿವೇಶನದ ಮುಕ್ತಾಯದ ದಿನದಂದು ಯುಸಿಸಿ ಮಸೂದೆಯನ್ನು ಮಂಡಿಸಲಾಗುವುದು ಎಂದು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಿಳಿಸಿದರು.

---

ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಉಪಮುಖ್ಯಮಂತ್ರಿಗಳಾದ ಏಕನಾಥ್ ಶಿಂಧೆ ಮತ್ತು ಸುನೇತ್ರಾ ಪವಾರ್ ಅವರು ಇಂದು ನಾಸಿಕ್-ತ್ರಯಂಬಕೇಶ್ವರ ಸಿಂಹಸ್ಥ ಕುಂಭಮೇಳದ ಲಾಂಛನವನ್ನು ಅನಾವರಣಗೊಳಿಸಿದರು. ಈ ಲಾಂಛನ, ನಾಸಿಕ್‌ನ ಪ್ರಸಿದ್ಧ ತ್ರಯಂಬಕೇಶ್ವರ ದೇವಾಲಯದ ಪ್ರಾತಿನಿಧ್ಯವಾದ ತ್ರಿಶೂಲ ಮತ್ತು ಶಿವಲಿಂಗದ ಆಕಾರದಲ್ಲಿರುವ ಗೋದಾವರಿ ನದಿಯನ್ನು ಚಿತ್ರಿಸುತ್ತದೆ. ಈ ಸಂದರ್ಭದಲ್ಲಿ ಮಾತನಾಡಿದ ದೇವೇಂದ್ರ ಫಡ್ನವೀಸ್, ಈ ಲಾಂಛನ, ಭಾರತದ ಸಾಂಸ್ಕೃತಿಕ ಪರಂಪರೆ, ಸಂಪ್ರದಾಯ ಮತ್ತು ರಾಷ್ಟ್ರೀಯ ಏಕೀಕರಣದ ಬಲವಾದ ಸಂದೇಶವನ್ನು ನೀಡುತ್ತದೆ ಎಂದು ಹೇಳಿದ್ದಾರೆ.

---

ನವರಾಯ್‌ಪುರದ ಶಹೀದ್ ವೀರ ನಾರಾಯಣ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಕೊಲ್ಕತ್ತಾ ನೈಟ್‌ರೈಡರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಮಳೆಯ ಕಾರಣ ಟಾಸ್ ವಿಳಂಬವಾಗಿದೆ.

---

ಅಂತಾರಾಷ್ಟ್ರೀಯ ವಿಮಾನಯಾನಗಳನ್ನು ಕಡಿಮೆ ಮಾಡಲು ಏರ್ ಇಂಡಿಯಾ ನಿರ್ಧರಿಸಿದ್ದು, ಕೆಲವು ವಿದೇಶಿ ಮಾರ್ಗಗಳಲ್ಲಿ ಸೇವೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ. ವಾಯುಪ್ರದೇಶದ ನಿರ್ಬಂಧಗಳು ಮತ್ತು ವಿಮಾನ ಇಂಧನ ಬೆಲೆ ಏರಿಕೆ ಹಿನ್ನಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ದೆಹಲಿ-ಚಿಕಾಗೊ, ಮುಂಬೈ-ನ್ಯೂಯಾರ್ಕ್, ದೆಹಲಿ-ಶಾಂಘೈ, ಚೆನ್ನೈ-ಸಿಂಗಾಪುರ ಸೇರಿದಂತೆ ಇತರೆ ಮಾರ್ಗಗಳಲ್ಲಿ ಸೇವೆಗಳನ್ನು ತಾತ್ಕಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ಏರ್ ಇಂಡಿಯಾ ತಿಳಿಸಿದೆ.

---

ಬ್ಯಾಂಕಾಂಕ್‌ನಲ್ಲಿ ನಡೆಯುತ್ತಿರುವ ಥೈಲ್ಯಾಂಡ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಪಿ.ವಿ.ಸಿಂಧು ಮತ್ತು ಕಿಡಂಬಿ ಶ್ರೀಕಾಂತ್ ಪ್ರಿ-ಕ್ವಾರ್ಟರ್ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ.

ಮಹಿಳೆಯರ ಸಿಂಗಲ್ಸ್ ಪಂದ್ಯದಲ್ಲಿ ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು ಕೇವಲ ೩೩ ನಿಮಿಷಗಳಲ್ಲಿ ಚೈನೀಸ್ ತೈಪೆಯ ತುಂಗ್ ಸಿಯೊ-ಟಾಂಗ್ ಅವರನ್ನು ೨೧-೯, ೨೧-೧೨ ನೇರ ಸೆಟ್‌ಗಳಿಂದ ಪರಾಭವಗೊಳಿಸಿದರು. ೧೬ರ ಸುತ್ತಿನಲ್ಲಿ ಅವರು ಡೆನ್ಮಾರ್ಕ್‌ನ ಅಮಾಲಿ ಶುಲ್ಜ಼ ಅವರನ್ನು ಎದುರಿಸಲಿದ್ದಾರೆ.

ಇದೇ ವೇಳೆ ಪುರುಷರ ಸಿಂಗಲ್ಸ್‌ನಲ್ಲಿ ಕಿಡಂಬಿ ಶ್ರೀಕಾಂತ್ ಅವರು, ಸಿಂಗಾಪುರದ ಲೋಹ್ ಕೀನ್ ಯೂ ಅವರನ್ನು ೨೧-೧೪, ೨೧-೧೫ ಸೆಟ್‌ಗಳಿಂದ ಸೋಲಿಸಿದರು. ಮುಂದಿನ ಸುತ್ತಿನಲ್ಲಿ ಅವರು ಚೈನೀಸ್ ತೈಪೆಯ ಸು ಲಿ ಯಾಂಗ್ ಅವರನ್ನು ಎದುರಿಸಲಿದ್ದಾರೆ.

ಇನ್ನೊಂದೆಡೆ, ಭಾರತದ ಆಯುಷ್‌ಶೆಟ್ಟಿ ಅವರು ಜಪಾನ್‌ನ ಕೊಡೈ ನರೊಕಾ ಅವರ ವಿರುದ್ಧ ಪರಾಭವಗೊಂಡ ನಂತರ ಪಂದ್ಯಾವಳಿಯಿಂದ ನಿರ್ಗಮಿಸಿದರು.

__________ ಮುಕ್ತಾಯ __________